# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 2046 |
| ಸದಸ್ಯರ ಹೆಸರು | : ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) |
| ಉತ್ತರಿಸುವ ಸಚಿವರು | : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು |
| ಉತ್ತರಿಸುವ ದಿನಾಂಕ | : 27-03-2020 |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ | ಮೈಸೂರಿನಿಂದ ತಿ.ನರಸೀಪುರ, ಮೂಗೂರು, ಸಂತೇಮಾರನಹಳ್ಳಿ ಮೂಲಕ ಚಾಮರಾಜನಗರಕ್ಕೆ ಸಾರಿಗೆ ಬಸ್ ಸೌಲಭ್ಯ ಬಹಳ ಕಡಿಮೆ ಇದ್ದು, ಹೆಚ್ಚಿನ ಬಸ್ ಸೌಲಭ್ಯ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; | ಮೈಸೂರು, ತಿ.ನರಸೀಪುರ, ಮೂಗೂರು, ಸಂತೇಮಾರನರಹಳ್ಳಿ ಮೂಲಕ ಚಾಮರಾಜನಗರಕ್ಕೆ ಸಾರ್ವಜನಿಕ ಪ್ರಯಾಣಿಕರು ಮತ್ತು ವಿಧ್ಯಾರ್ಥಿಗಳ ಅನುಕೂಲಕ್ಕಾಗಿ 44 ಸುತ್ತುವಳಿಗಳ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ. ಅದೇ ರೀತಿ ಚಾಮರಾಜನಗರದಿಂದ ಸಂತೇಮರಹಳ್ಳಿ, ಮೂಗೂರು, ತಿ.ನರಸೀಪುರ ಮಾರ್ಗವಾಗಿ ಮೈಸೂರಿಗೆ 44 ಸುತ್ತುವಳಿಗಳು ಒಳಗೊಂಡಂತೆ ಈ ಮಾರ್ಗದಲ್ಲಿ ಪ್ರತಿನಿತ್ಯ ಒಟ್ಟು 88 ಸುತ್ತುವಳಿಗಳು ಕಾರ್ಯಾಚರಣೆಯಲ್ಲಿರುತ್ತವೆ.<br><br>ಅದೇ ಮಾರ್ಗದಲ್ಲಿ ಮೈಸೂರು, ಟಿ.ನರಸೀಪುರ, ಮೂಗೂರು, ಸಂತೇಮಾರನಹಳ್ಳಿ ಮೂಲಕ ಯಳಂದೂರು ಮತ್ತು ಹಿಂದಕ್ಕೆ ಒಟ್ಟು 48 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಪ್ರಸ್ತುತ ಅಲ್ಲಿನ ಜನದಟ್ಟಣೆ ಹಾಗೂ ಅವಶ್ಯಕತೆಗೆ ಅನುಗುಣವಾಗಿ ಮೈಸೂರು, ತಿ.ನರಸೀಪುರ, ಮೂಗೂರು, ಸಂತೇಮರಹಳ್ಳಿ ಮೂಲಕ ಚಾಮರಾಜನಗರಕ್ಕೆ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಸಾರ್ವಜನಿಕ ಪ್ರಯಾಣಿಕರು ಮತ್ತು ವಿದ್ಯಾರ್ಥಿಗಳಿಗೆ ಅನುಕೂಲಕರವಾದ ಸಮಯದಲ್ಲಿ ಸಾರಿಗೆ ಸೌಲಭ್ಯ ಕಲ್ಪಿಸಿರುವುದರಿಂದ ಸಾರ್ವಜನಿಕ ಪ್ರಯಾಣಿಕರು ಮತ್ತು ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದುಕೊಳ್ಳುತ್ತಿದ್ದಾರೆ.<br><br>ಈ ಮಾರ್ಗದಲ್ಲಿ ಖಾಸಗಿ ಸಾರಿಗೆ ಪ್ರವರ್ತಕರೂ ಸಹ ಸಾರಿಗೆ ಸೌಲಭ್ಯವನ್ನು ಕಲ್ಪಿಸುತ್ತಿದ್ದಾರೆ. |
| ಆ | ಈ ಮಾರ್ಗದಲ್ಲಿ ಪ್ರತಿದಿನ ನೂರಾರು ವಿದ್ಯಾರ್ಥಿಗಳು, ಸಾರ್ವಜನಿಕರು ಪ್ರಯಾಣ ಮಾಡುತ್ತಿದ್ದು, ಸಾಕಷ್ಟು ಸಾರಿಗೆ ಬಸ್ ಸೌಲಭ್ಯ ಇಲ್ಲದೆ ತೊಂದರೆ ಅನುಭವಿಸುತ್ತಿರುವುದು ಹಾಗೂ ಈ ಬಗ್ಗೆ ಸಾರ್ವಜನಿಕರು ಸಾರಿಗೆ ಸಂಸ್ಥೆ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಸಾಕಷ್ಟು ಬಸ್‌ಗಳನ್ನು ಸಂಚಾರಕ್ಕೆ ಬಿಡದೇ ಇರಲು ಕಾರಣವೇನು? | |

ಸಂಖ್ಯೆ: ಟಿಡಿ 136 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು